ಯೋಜನೆ	ಅನುದಾನ (ಲಕ್ಷ ರೂಗಳು)	ವೆಚ್ಚ (ಲಕ್ಷ ರೂಗಳು)
ಕೆರೆಗಳ ದುರಸ್ತಿ ಮತ್ತು ಪುನಃಶ್ಚೇತನ ಕಾರ್ಯ	9,550.00	8,226.02
ಪಶ್ಚಿಮಾಭಿಮುಖವಾಗಿ ಹರಿಯುವ ನದಿ/ ಕೊಳ್ಳಗಳಿಗೆ ಅಡ್ಡಲಾಗಿ ಕಿಂಡಿ ಅಣೆಕಟ್ಟುಗಳ ನಿರ್ಮಾಣ ಕಾರ್ಯ	3,388.50	2,993.66

ಹೇಮಾವತಿ ಜಲಾಶಯದಿಂದ ನೆಲಮಂಗಲ ಪಟ್ಟಣಕ್ಕೆ ಕುಡಿಯುವ ನೀರು

161 : (269)

ಶ್ರೀ ನಾಗರಾಜು ಎಂ.ಎ (ನೆಲಮಂಗಲ)

ಅ) ಹೇಮಾವತಿ ಜಲಾಶಯದಿಂದ ನೆಲಮಂಗಲ ಪಟ್ಟಣಕ್ಕೆ ನೀರನ್ನು ಒದಗಿಸುವ ಯೋಜನೆಯ ಪ್ರಸ್ತಾವನೆ ಸರ್ಕಾರದ ಮುಂದಿಯೇ?

ಆ) ಹಾಗಿದ್ದಲ್ಲಿ. ಈ ಯೋಜನೆಗೆ ಯಾವಾಗ ಮಂಜೂರಾತಿ ನೀಡಲಾಗುವುದು?

ಇ) ಈ ಯೋಜನೆಗಾಗಿ ಸರ್ಕಾರ ಕಳೆದ ಆಯವ್ಯಯದ ಅನುದಾನದಲ್ಲಿ ಮೀಸಲಿಟ್ಟಿದ್ದ ಮೊತ್ತವೆಷ್ಟು?

ಈ) ಪ್ರಸಕ್ತ ಸಾಲಿನಲ್ಲಿ ಈ ಯೋಜನೆಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಸರ್ಕಾರ ಕ್ರಮ ಕೈಗೊಳ್ಳುವುದೆ ?

ಉ) ಹಾಗಿದ್ದಲ್ಲಿ, ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು ?

ಅ) ನೆಲಮಂಗಲ ಪಟ್ಟಣಕ್ಕೆ ಕುಡಿಯುವ ನೀರು ಒದಗಿಸುವ ಯೋಜನೆಯು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಡಿ ಮಂಡಳಿ, ಬೆಂಗಳೂರು ಇವರ ವ್ಯಾಪ್ತಿಗೆ ಬರುತ್ತಿದ್ದು, ಜಲ ಸಂಪನ್ಮೂಲ ಇಲಾಖೆಯಿಂದ ಈ ಯೋಜನೆಯನ್ನು ಕೈಗೊಳ್ಳುವ ಪ್ರಸ್ತಾವನೆ ಇರುವುದಿಲ್ಲ.

ಆ) ಮೇಲಿನ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ಮೇಲಿನ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಈ) ಮೇಲಿನ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಉ) ಮೇಲಿನ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದಿಂದ ವಿದ್ಯಾರ್ಥಿಗಳಿಗೆ ಸಮವಸ್ತ್ರ ಸರಬರಾಜು

141 : (217)

ಶ್ರೀ ಹಾರಿಸ್ ಎನ್.ಎ. (ಶಾಂತಿ ನಗರ)

ಅ) ರಾಜ್ಯದಲ್ಲಿ ವಿದ್ಯಾರ್ಥಿಗಳಿಗೆ ಒದಗಿಸಲಾಗುತ್ತಿರುವ ಸಮವಸ್ತ್ರ ಪೂರೈಕೆಯ ಪೂರ್ಣ ಜವಾಬ್ದಾರಿಯನ್ನು ಕೆ.ಹೆಚ್.ಡಿ.ಸಿ.ಯವರಿಗೆ ವಹಿಸಿಕೊಡಲಾಗಿದೆಯೇ; ಇಲ್ಲವಾದಲ್ಲಿ, ಆ ವ್ಯವಸ್ಥೆಯ ಕುರಿತಾದ ವಿವರಗಳೇನು?

ಆ) ಕೆ.ಹೆಚ್.ಡಿ.ಸಿ.ಯಿಂದ ಎಷ್ಟು ಪ್ರಮಾಣದ ಸಮವಸ್ತ್ರ ಬಟ್ಟೆಗಳನ್ನು ಖರೀದಿಸಲಾಗುತ್ತಿದೆ, ಅದಕ್ಕಾಗಿ ನಿಗಮಕ್ಕೆ ಕಳೆದ ಎರಡು ವರ್ಷಗಳಲ್ಲಿ ಸಂದಾಯ ಮಾಡಿದ ಮೊತ್ತ ಬಾಕಿ ಇರುವ ಹಣದ ಮೊತ್ತ ಎಷ್ಟು?

ಇ) ರಾಜ್ಯದಲ್ಲಿ ನೇಕಾರಿಕೆಯು ಕ್ಷೀಣಿಸುತ್ತಿರುವ ಪರಿಸ್ಥಿತಿಯಲ್ಲಿ ಸಮವಸ್ತ್ರದ ಪೂರ್ಣ ಜವಾಬ್ದಾರಿಯನ್ನು ಕೆ.ಹೆಚ್.ಡಿ.ಸಿ.ಗೆ ವಹಿಸಿ ಅದಕ್ಕಾಗಿ ಬೇಕಾಗುವ ನೆರವು ಮತ್ತಿತರ ಸೌಲಭ್ಯಗಳನ್ನು ನೀಡಿ ಪ್ರೋತ್ಸಾಹಿಸುವ ಕುರಿತು ಸರ್ಕಾರದ ನಿಲುವುಗಳೇನು?